# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1243** |
| ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 07-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಕಾಫಿ ಬೆಳೆಗಾರರು ಕಾಫಿ ಕೃಷಿ ಉದ್ದೇಶಕ್ಕೆ ಬಳಸುವ 10 ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆಯೇ; | ರಾಜ್ಯದಲ್ಲಿನ ಎಲ್ಲಾ ಕಾಫಿ ಬೆಳೆಗಾರರು ಕಾಫಿ ಕೃಷಿ ಉದ್ದೇಶಕ್ಕೆ ಬಳಸುವ 10 ಅಶ್ವಶಕ್ತಿವರೆಗಿನ ಹಾಗೂ 10 ಅಶ್ವಶಕ್ತಿಗಿಂತ ಮೇಲ್ಪಟ್ಟ ಪಂಪ್‌ಸೆಟ್‌ಗಳ ವಿದ್ಯುತ್ ಸ್ಥಾವರಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡುತ್ತಿರುವುದಿಲ್ಲ. |
| ಆ) | ಇಲ್ಲದಿದ್ದಲ್ಲಿ, ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ತಮ್ಮ ಕಾಫಿ ಬೆಳೆಗೆ ಸ್ಪ್ರಿಂಕ್ಲರ್ ಮಾಡಲು ವರ್ಷದಲ್ಲಿ 3 ತಿಂಗಳು ಮಾತ್ರ ಉಪಯೋಗಿಸುವ ಪಂಪ್‌ಸೆಟ್‌ಗಳಿಗೆ ಇಡೀ ವರ್ಷಕ್ಕೆ ಅನ್ವಯಿಸುವಂತೆ ಕನಿಷ್ಠ ದರ ನಿಗದಿ ಮಾಡಿ ಹಣ ವಸೂಲಿ ಮಾಡುತ್ತಿರುವುದರಿಂದ, ಈಗಾಗಲೇ ನಷ್ಟದಲ್ಲಿರುವ ಕಾಫಿ ಬೆಳೆಗಾರರು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | • ರಾಜ್ಯದಲ್ಲಿನ ಎಲ್ಲಾ ವಿದ್ಯುತ್ ಗ್ರಾಹಕರು ಬಳಸುವ ವಿವಿಧ ರೀತಿಯ ವಿದ್ಯುತ್ ಬಳಕೆಗೆ ಜಕಾತಿಗಳನ್ನು ನಿಗದಿಪಡಿಸಿ ವಿದ್ಯುತ್ ದರಗಳನ್ನು ವಿದ್ಯುಚ್ಛಕ್ತಿ ಕಾಯ್ದೆ-2003 ರನ್ವಯ ನಿಗದಿಪಡಿಸುವುದು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ವ್ಯಾಪ್ತಿಗೆ ಒಳಪಟ್ಟಿದ್ದು, ಸರ್ಕಾರದ ವ್ಯಾಪ್ತಿಗೆ ಬರುವುದಿಲ್ಲ.<br><br>• ಅದರಂತೆ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಕಾಲಕಾಲಕ್ಕೆ ಅನುಮೋದಿಸಿ ನಿಗದಿಪಡಿಸುವ ದರಗಳಂತೆ ರಾಜ್ಯದಲ್ಲಿನ ಖಾಸಗೀ ತೋಟಗಾರಿಕೆ ನರ್ಸರಿಗಳು, ಕಾಫಿ, ಟೀ ಮತ್ತು ರಬ್ಬರ್ ಪ್ಲಾಂಟೇಷನ್‌ಗಳನ್ನು ಹೊಂದಿರುವ 10 ಹೆಚ್.ಪಿ ವರೆಗಿನ ಹಾಗೂ 10 ಹೆಚ್.ಪಿ ಗೂ ಮೇಲ್ಪಟ್ಟ ವಿದ್ಯುತ್ ಸ್ಥಾವರಗಳ ಗ್ರಾಹಕರುಗಳು ವಿದ್ಯುತ್ ಬಳಕೆಗನುಸಾರವಾಗಿ ವಿದ್ಯುತ್ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ. |
| ಇ) | ಬಂದಿದ್ದಲ್ಲಿ ಸದರಿ ಪಂಪ್‌ಸೆಟ್‌ಗಳಿಗೆ ಅವು ವರ್ಷದಲ್ಲಿ ಬಳಕೆಯಾಗುವ 3 ತಿಂಗಳುಗಳಿಗೆ ಮಾತ್ರ ಅನ್ವಯಿಸುವಂತೆ ಕನಿಷ್ಠ ದರ ನಿಗದಿ ಮಾಡಿ ವಸೂಲಿ ಮಾಡಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ; | |

...2

| | | |
|---|---|---|
| ಈ) | ಕಳೆದ ಹಲವಾರು ವರ್ಷಗಳಿಂದ ಸತತವಾಗಿ ಕಾಫಿ ಬೆಳೆ ಹಾಳಾಗಿರುವುದರಿಂದ ಮತ್ತು ಸತತ ಬೆಲೆ ಕುಸಿತದಿಂದಾಗಿ ಕೊಡಗಿನ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದನ್ನು ಪರಿಗಣಿಸಿ, ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ಬಳಸುವ 10 ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ? | ಮಾನ್ಯ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಕಾಫಿ ಬೆಳೆಗಾರರ ಹಿತ ದೃಷ್ಟಿಯಿಂದ ಆರ್ಥಿಕ ಹೊರೆಯಾಗದಂತೆ ಕಡಿಮೆ ದರದಲ್ಲಿ, ಅಂದರೆ, 10 ಹೆಚ್.ಪಿ ಮತ್ತು ಅದಕ್ಕಿಂತ ಕಡಿಮೆ ಸಾಮರ್ಥ್ಯದ ಹೊರೆಯನ್ನು ಹೊಂದಿರುವ ಕಾಫಿ ಬೆಳೆಗಾರರ ಪ್ರತಿ ಹೆಚ್.ಪಿ ಗೆ ಮಾಸಿಕ ನಿಗದಿತ ಶುಲ್ಕ ರೂ. 80/- ಹಾಗೂ ಪ್ರತಿ ಯೂನಿಟ್ ಬಳಕೆಗೆ ರೂ.3.85 ಶುಲ್ಕವನ್ನು ವಿಧಿಸಲಾಗುತ್ತಿದ್ದು, ಈ ಪ್ರವರ್ಗದ ವಿದ್ಯುತ್ ಗ್ರಾಹಕರುಗಳ ವಿದ್ಯುತ್ ಶುಲ್ಕ ಪಾವತಿಗೆ ವಿನಾಯಿತಿ ನೀಡುವ ವಿಷಯವು ಸರ್ಕಾರದ ಪರಿಶೀಲನೆ ಹಂತದಲ್ಲಿದ್ದು ಅಂತಿಮ ನಿರ್ಣಯ ಕೈಗೊಳ್ಳಬೇಕಾಗಿರುತ್ತದೆ. |

ಸಂಖ್ಯೆ: ಎನರ್ಜಿ 48 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು